ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ., ರವರ ನ್ಯಾಯಾಲಯದಲ್ಲಿ, ತರೀಕೆರೆ.
ಸಿಸಿ ನಂಬರ್.1012/2023

| | | |
|---|---|---|
| ಸಾಕ್ಷಿಯ ಹೆಸರು | : ಅಜಯ್ | ಸಿ.ಡಬ್ಲ್ಯು 3 |
| ತಂದೆಯ ಹೆಸರು | : ದೇವರಾಜ್ | ಪಿ.ಡಬ್ಲ್ಯು 4 |
| ವಯಸ್ಸು | : 29 ವರ್ಷ | |
| ಉದ್ಯೋಗ | : ವ್ಯವಸಾಯ | |
| ವಾಸ ಸ್ಥಳ | : ಬೆಟ್ಟದಹಳ್ಳಿ | |

ದಿನಾಂಕ:27.11.2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು:

ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ. ರವರಿಂದ:-

ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ. ಪೋಲೀಸರು ನನ್ನ ಮುಂದೆ ಯಾವುದೇ ಪಂಚನಾಮೆಯನ್ನು ಮಾಡಿಲ್ಲ ಮತ್ತು ಯಾವುದೇ ಮದ್ಯವನ್ನು ಅಮಾನತ್ತು ಪಡಿಸಿಕೊಂಡಿಲ್ಲ. ಆರೋಪಿ ನಮ್ಮದೇ ಊರಿನವರು ಇದ್ದು ಅವರ ಪರಿಚಯ ನನಗೆ ಇದೆ. ಈ ಕೆಲವು ದಿನಗಳ ಹಿಂದೆ ಪೋಲೀಸರು ಊರಿಗೆ ಬಂದಾಗ ಒಂದು ದಾಖಲೆಯ ಮೇಲೆ ನನ್ನ ಸಹಿ ಪಡೆದುಕೊಂಡಿದ್ದಾರೆ ಅದು ಯಾವ ದಾಖಲೆ ಎಂದು ಈಗ ನೆನಪಿಲ್ಲ. ಸಾಕ್ಷಿಯ ಸಹಿಯನ್ನು ನಿಪಿ-1(ಸಿ) ಎಂದು ಗುರುತಿಸಲಾಯಿತು. ಸಾಕ್ಷಿಯು ತಾವು ಭಾವಚಿತ್ರದಲ್ಲಿ ಇರುವುದಾಗಿ ನುಡಿಯುತ್ತಾರೆ. ಭಾವಚಿತ್ರವನ್ನು ಈಗಾಗಲೇ ನಿಪಿ-3 ಎಂದು ಗುರುತಿಸಲಾಗಿದೆ.

(ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಅಂತ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ. ರವರು ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು)

ಪಾಟೀ ಸವಾಲು: ಮಾನ್ಯ ಸ.ಸ.ಅ.ರವರಿಂದ:-

ದಿನಾಂಕ 15.09.2022 ರಂದು ಪೋಲೀಸರು ಬೆಟ್ಟದಹಳ್ಳಿ ಗ್ರಾಮದ ಎನ್.ಹೆಚ್.206 ರಸ್ತೆಯಲ್ಲಿರುವ ಆರೋಪಿಯ ಅಂಗಡಿಯ ಬಳಿ ಸಂಜೆ 6.15 ರಿಂದ 7.20 ರ ಮಧ್ಯದಲ್ಲಿ ಪಂಚನಾಮೆಯನ್ನು ಜರುಗಿಸಿ 90 ಎಮ್.ಎಲ್.ನ ಓಸಿ ವಿಸ್ಕಿ ಟೆಟ್ರಾ ಪ್ಯಾಕೇಟುಗಳು, 180 ಎಮ್.ಎಲ್ ನ ಓಟಿ ವಿಸ್ಕಿ ಟೆಟ್ರಾ ಪ್ಯಾಕೇಟುಗಳನ್ನು ಆರೋಪಿಯ ಕಡೆಯಿಂದ ಅಮಾನತ್ತು ಪಡಿಸಿಕೊಂಡು ಸ್ಥಳದಲ್ಲಿಯೇ ಪಂಚನಾಮೆಯನ್ನು ಬರೆದು ನನ್ನ ಸಹಿ ಪಡೆದುಕೊಂಡರು ಎಂದರೆ ಸರಿಯಲ್ಲ. ಆರೋಪಿ ನಮ್ಮ ಊರಿನವರು ಇರುವ ಕಾರಣ ಆತನಿಗೆ ಸಹಾಯ ಮಾಡಲು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಅಲ್ಲಗಳೆದ ಹೇಳಿಕೆಯನ್ನು ನಿಪಿ-5 ಎಂದು ಗುರುತಿಸಲಾಯಿತು.

<u>ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ</u>

ವಕೀಲರು ಇರುವುದಿಲ್ಲ ಎಂದು ಹೇಳುತ್ತಾರೆ.

<u>ಮರುವಿಚಾರಣೆ :</u> ಇಲ್ಲಃ

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸ ಇ ಎ ಒ

ಸಹಿ/-

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂ., ರವರ ನ್ಯಾಯಾಲಯ, ತರೀಕೆರೆ.